ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01**

ಸಂಖ್ಯೆ:-ಇಇಡಿಎಸ್/ಶಿಕ್ಷಕ ಮಿತ್ರ-2020-21 ದಿನಾಂಕ:-19-12-2022

**-:ಜ್ಞಾಪನ:-**

**ವಿಷಯ:-** ಶಿಕ್ಷಕರಿಗೆ 17 ಸೇವಾ ಸೌಲಭ್ಯಗಳನ್ನು ಮಂಜೂರು ಮಾಡುವಾಗ ಕಡ್ಡಾಯವಾಗಿ ಆನ್ ಲೈನ್ ಮುಖಾಂತರವೇ ಪ್ರಸ್ತಾವನೆಗಳನ್ನು ಸ್ವೀಕರಿಸಿ ಇತ್ಯರ್ಥಪಡಿಸುವ ಬಗ್ಗೆ.

**ಉಲ್ಲೇಖ:**-01) ಈ ಕಛೇರಿಯ ಸುತ್ತೋಲೆ ಸಂಖ್ಯೆ:-ಇ-ಆಡಳಿತ/ಶಿಕ್ಷಕ ಮಿತ್ರ/2020-21 ದಿ:-15/09/2022

02) ದಿನಾಂಕ:-16/12/2022 ಮತ್ತು 17/12/2022 ರಂದು ಈ ಕಛೇರಿ ವಿಡಿಯೋ ಸಂವಾದ ಕಾರ್ಯಕ್ರಮದ ಮೂಲಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ವ್ಯಕ್ತಗೊಂಡ ಹಿಮ್ಮಾಹಿತಿಯಂತೆ

********

ಈ ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ಆಡಳಿತದಲ್ಲಿ ಪಾರದರ್ಶಕತೆಯನ್ನು ಕಾಯ್ದುಕೊಂಡು ಶಿಕ್ಷಕರಿಗೆ/ಅಧಿಕಾರಿಗಳಿಗೆ/ ಸಿಬ್ಬಂದಿ ವರ್ಗದವರಿಗೆ ನಿಯಮಾನುಸಾರ ನೀಡುವ 17 ಸೇವೆಗಳನ್ನು ಕಡ್ಡಾಯವಾಗಿ ಆನ್ ಲೈನ್ ಮುಖಾಂತರವೇ ಸ್ವೀಕರಿಸಿ ಆನ್‌ಲೈನ್ ಮುಖಾಂತರವೇ ಇತ್ಯರ್ಥಪಡಿಸುವಂತೆ ಮತ್ತು ಯಾವುದೇ ಕಾರಣಕ್ಕೂ ಭೌತಿಕ ಪ್ರಸ್ತಾವನೆಗಳನ್ನು ಸ್ವೀಕರಿಸದಂತೆ ಉಲ್ಲೇಖ(1) ರ ಪತ್ರದಲ್ಲಿ ಈಗಾಗಲೇ ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಸೂಚಿಸಲಾಗಿತ್ತು.

ಆದರೆ ಈ ಬಗ್ಗೆ ಇ.ಇ.ಡಿ.ಎಸ್ ತಂತ್ರಾಂಶದ ವರದಿಗಳನ್ನು ಪರಿಶೀಲಿಸಿದ ಸಂದರ್ಭದಲ್ಲಿ ರಾಜ್ಯದ ಕೆಲವು ಜಿಲ್ಲೆಗಳಲ್ಲಿ ಈ ಸೂಚನೆಯನ್ನು ಕಟ್ಟುನಿಟ್ಟಾಗಿ ಅನುಪಾಲನೆ ಮಾಡದೇ ಇರುವುದು ಕಂಡು ಬಂದಿರುತ್ತದೆ. ಇನ್ನೂ ಕೆಲವು ಜಿಲ್ಲೆಗಳಲ್ಲಿ ಸಲ್ಲಿಕೆಯಾದ ಆನ್ ಲೈನ್ ಪ್ರಸ್ತಾವನೆಗಳ ಸಂಖ್ಯೆಯು ಎರಡಂಕಿ ಮೀರದೇ ಇದ್ದು ಆ ಜಿಲ್ಲೆಗಳಲ್ಲಿ ಇದು ಕಡ್ಡಾಯವಾಗಿ ಅನುಷ್ಠಾನ ವಾಗದೇ ಆಫ್‌ಲೈನ್ ಮೂಲಕವೇ ಭೌತಿಕ ಪ್ರಸ್ತಾವನೆಗಳನ್ನು ಸ್ವೀಕರಿಸುತ್ತಿರುವ ಸಂದೇಹ ವ್ಯಕ್ತವಾಗುತ್ತಿದೆ. ಉಲ್ಲೇಖ(2) ರಂತೆ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿಯೂ ಸಹ ಈ ಸಂಬಂಧ ಸೂಚನೆಗಳನ್ನ ನೀಡಲಾಗಿರುತ್ತದೆ

ಈ ತೆರನಾದ ಕ್ರಮ ಶಿಕ್ಷಕರಿಗೆ ನಿಯಮಾನುಸಾರ ಮಂಜೂರು ಮಾಡಬೇಕಾದ ಸೇವಾ ಸೌಲಭ್ಯಗಳನ್ನು ನಿಗಧಿತ ಕಾಲಮಿತಿಯೊಳಗೆ ಮಂಜೂರು ಮಾಡದೇ ಶಿಕ್ಷಕರಿಗೆ ತೊಂದರೆಯಾಗುತ್ತಿರುವುದಲ್ಲದೆ ಸದರಿ ಸೇವಾ ಸೌಲಭ್ಯಗಳನ್ನು ಪಡೆಯಲು ಶಿಕ್ಷಕರು ಕಛೇರಿಗೆ ಧಾವಿಸುತ್ತಾ ತಮ್ಮ ಬೋಧನಾ ಕಾರ್ಯಗಳಿಂದ ದೂರ ಉಳಿದು ವಿದ್ಯಾರ್ಥಿಗಳ ಕಲಿಕೆಗೆ ಹಿನ್ನಡೆಯಾಗುವ ಸಂಭವವಿರುತ್ತದೆ.

ಈ ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಇಲಾಖೆಯ ಎಲ್ಲಾ ಬಟವಾಡೆ ಅಧಿಕಾರಿಗಳು ಉಲ್ಲೇಖಿತ ಪತ್ರಗಳಲ್ಲಿ ಈಗಾಗಲೇ ಸೂಚಿಸಿರುವಂತೆ ಶಿಕ್ಷಕರಿಗೆ ಸೇವಾ ಸೌಲಭ್ಯಗಳನ್ನು ಮಂಜೂರು ಮಾಡಲು ಆನ್‌ಲೈನ್ ಮೂಲಕ ಪ್ರಸ್ತಾವನೆಗಳನ್ನು ಪಡೆದು ಇತ್ಯರ್ಥಪಡಿಸಿ **"ಮಂಜೂರಾತಿ ಆದೇಶ ನೀಡುವಾಗ ತಂತ್ರಾಂಶದಲ್ಲಿ ಸೃಜನೆಯಾಗುವ ಪ್ರಸ್ತಾವನೆಯ ಕ್ರಮ ಸಂಖ್ಯೆಯನ್ನು ಮಂಜೂರಾತಿ ಆದೇಶ ಪತ್ರದಲ್ಲಿ ಕಡ್ಡಾಯವಾಗಿ ನಮೂದಿಸಿ ಆದೇಶ ಪತ್ರವನ್ನು ನೀಡಲು ತಿಳಿಸಿದೆ."**

ಮುಂದುವರೆದು ಸದರಿ ಮಂಜೂರಾತಿ ಆದೇಶ ಪತ್ರದಲ್ಲಿ ಆನ್ ಲೈನ್ ಪ್ರಸ್ತಾವನೆಯ ಕ್ರಮ ಸಂಖ್ಯೆಯು ನಮೂದಾಗದೇ ಇದ್ದಲ್ಲಿ ಸದರಿ ಮಂಜೂರಾತಿಯ ಕಛೇರಿ ಆದೇಶ ಪತ್ರವನ್ನು ಅಮಾನ್ಯವೆಂದು ಪರಿಗಣಿಸಲಾಗುವುದು ಈ ಕಛೇರಿ ವಿಡಿಯೋ ಸಂವಾದ ಕಾರ್ಯಕ್ರಮದ ಮೂಲಕ ನಡೆದ ಪ್ರಗತಿ ಪರಿಶೀಲನಾ ಸಭೆ ದಿನಾಂಕ: 16/12/2022 ಮತ್ತು 17/12/2022 ರಂತೆ ಈಗಾಗಲೇ ಮೌಖಿಕವಾಗಿ ತಿಳಿಸಿರುವುದರಿಂದ ಸದರಿ ಕ್ರಮವನ್ನು ದಿನಾಂಕ:-16/12/2022 ರಿಂದ ಕಡ್ಡಾಯವಾಗಿ ಅನುಪಾಲನೆ ಮಾಡುವಂತೆ ಈ ಮೂಲಕ ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಸೂಚಿಸಿದೆ.

ಈ ಬಗ್ಗೆ ತಾಂತ್ರಿಕ ತೊಂದರೆಗಳು ಕಂಡುಬಂದಲ್ಲಿ ಕೂಡಲೇ karonlineserviceshelp@gmail.com ಗೆ ವರದಿ ಸಲ್ಲಿಸಲು ತಿಳಿಸಿದೆ.

ಡಾ.ವಿಶಾಲ್.ಆರ್., ಭಾ.ಆ.ಸೇ.,
ಆಯುಕ್ತರು
19/12/2022

ಪ್ರತಿಯನ್ನು

1) ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ಇವರಿಗೆ ಮಾಹಿತಿಗಾಗಿ

2) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ ರವರಿಗೆ ಮಾಹಿತಿಗಾಗಿ
3) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ರವರಿಗೆ ಮಾಹಿತಿಗಾಗಿ
4) ರಾಜ್ಯದ ಎಲ್ಲಾ ನಿರ್ದೇಶಕರುಗಳ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ

ಇವರಿಗೆ,

1. ರಾಜ್ಯದ ಎಲ್ಲಾ ವಿಭಾಗೀಯ ಜಂಟಿ ನಿರ್ದೇಶಕರುಗಳ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ರವರ ಮುಂದಿನ ಅಗತ್ಯ ಕ್ರಮಕ್ಕಾಗಿ
3. ರಾಜ್ಯದ ಎಲ್ಲಾ ಉಪನಿರ್ದೇಶಕರು (ಅಭಿವೃದಿ) ರವರ ಮುಂದಿನ ಅಗತ್ಯ ಕ್ರಮಕ್ಕಾಗಿ
4. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ತುರ್ತು ಅಗತ್ಯ ಕ್ರಮಕ್ಕಾಗಿ.
5. ರಾಜ್ಯದ ಎಲ್ಲಾ ಸರ್ಕಾರಿ ಪ್ರೌಢಶಾಲಾ ಮುಖ್ಯಶಿಕ್ಷಕರಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖೇನ)
6. ಕಛೇರಿ ಪ್ರತಿ.